ದೇವನಹಳ್ಳಿ ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆಯನ್ನು ನೀಗಿಸಲು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯು ದೇವನಹಳ್ಳಿ ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದ್ದು, ಈ ಯೋಜನೆಯನ್ನು ಮೊದಲನೆಯ ಹಂತದಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ.

ಆ) ದೇವನಹಳ್ಳಿ ತಾಲ್ಲೂಕು, ಕುಂದಾಣ ಗ್ರಾಮದಲ್ಲಿ 66/11 ಕೆ.ವಿ. ವಿದ್ಯುತ್ ಉಪಕೇಂದ್ರ ಪ್ರಾರಂಭಿಸುವ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ.

ಇ) ಕುಂದಾಣ ಗ್ರಾಮದಿಂದ 10 ಕಿ.ಮೀ. ದೂರದಲ್ಲಿರುವ ಡಿ.ಕ್ರಾಸ್ (ದೊಡ್ಡಬಳ್ಳಾಪುರ) ಮತ್ತು 12 ಕಿ.ಮೀ. ದೂರದಲ್ಲಿರುವ ದೇವನಹಳ್ಳಿಯಲ್ಲಿ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಈ ವಿದ್ಯುತ್ ಕೇಂದ್ರಗಳಿಂದ ಕುಂದಾಣ ಗ್ರಾಮ ಮತ್ತು ಸುತ್ತ-ಮುತ್ತಲಿನ ಪ್ರದೇಶಗಳಿಗೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಡಿ.ಕ್ರಾಸ್ (ದೊಡ್ಡಬಳ್ಳಾಪುರ) 66/11 ಕೆ.ವಿ. ವಿದ್ಯುತ್ ಉಪಕೇಂದ್ರದ ಲೋಡ್ ಫ್ಯಾಕ್ಟರ್ (ಶೇಕಡ) 68.82 ರಷ್ಟಿರುತ್ತದೆ ಮತ್ತು ದೇವನಹಳ್ಳಿ 66/11 ಕೆ.ವಿ. ಉಪ ಕೇಂದ್ರದ ಲೋಡ್ ಫ್ಯಾಕ್ಟರ್ (ಶೇಕಡ) 80.58 ರಷ್ಟಿರುತ್ತದೆ. ಮುಂಬರುವ ದಿನಗಳಲ್ಲಿ ಅವಶ್ಯಕತೆ ಕಂಡು ಬಂದಲ್ಲಿ ಈ ಎರಡು ಉಪ ಕೇಂದ್ರಗಳ ಸಾಮರ್ಥ್ಯವನ್ನು ಹೆಚ್ಚಳಗೊಳಿಸುವ ಅಥವಾ ಹೊಸ ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುವುದು.

ಪ್ರವಾಸೋದ್ಯಮ ತಾಣದ ಅಭಿವೃದ್ಧಿ ಹಾಗೂ ಉದ್ಯಾನವನ ಮಂಜೂರಾತಿ

253 (317) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ತಾಣದ ಅಭಿವೃದ್ಧಿ ಮತ್ತು ಉದ್ಯಾನವನಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ದೇವನಹಳ್ಳಿ ತಾಲ್ಲೂಕಿನಲ್ಲಿ ಬರುವ ಐತಿಹಾಸಿಕ ಸ್ಥಳಗಳು ಸ್ಮಾರಕಗಳು ಯಾವುವು;

ಇ) ಟಿಪ್ಪುವಿನ ಜನ್ಮ ಸ್ಥಳವಾದ ಹಾಗೂ ಐತಿಹಾಸಿಕ ಪ್ರಸಿದ್ಧ ಕ್ಷೇತ್ರವಾದ ದೇವನಹಳ್ಳಿ ಕ್ಷೇತ್ರದ ಅಭಿವೃದ್ಧಿಗಾಗಿ ಹಾಗೂ ಮೂಲಭೂತ

ಸೌಕರ್ಯಗಳನ್ನು ಒದಗಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ;

ಈ) ಪ್ರವಾಸಿ ತಾಣವಾದ ದೇವನಹಳ್ಳಿ ಕ್ಷೇತ್ರಕ್ಕೆ ಇದರ ಅಭಿವೃದ್ಧಿಯ ಸಲುವಾಗಿ ಇಲಾಖೆಯು ಕಳೆದ ಎರಡು ವರ್ಷಗಳಿಂದ ಬಿಡುಗಡೆ ಮಾಡಲ್ಪಟ್ಟ ಅನುದಾನವೆಷ್ಟು;

ಉ) ಈ ಪ್ರವಾಸಿ ಸ್ಥಳ ಅಭಿವೃದ್ಧಿಗೆ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಗಳನ್ನು ಸರ್ಕಾರವು ಹಮ್ಮಿಕೊಂಡಿದೆ (ವಿವರ ಒದಗಿಸುವುದು);

ಶ್ರೀ ಜೆ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಇರುವುದಿಲ್ಲ.

ಆ) ದೇವನಹಳ್ಳಿಯಲ್ಲಿರುವ ಟಿಪ್ಪು ಸುಲ್ತಾನನು ಹುಟ್ಟಿದ ಸ್ಥಳವನ್ನು ರಾಷ್ಟ್ರೀಯ ಸ್ಮಾರಕವಾಗಿ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ಗುರುತಿಸಿದೆ.

ಇ) ಈ ಸ್ಮಾರಕವು ಭಾರತೀಯ ಪುರಾತತ್ವ ಸಂರಕ್ಷಣಾ ಇಲಾಖೆಯ ವ್ಯಾಪ್ತಿಯಲ್ಲಿರುತ್ತದೆ. ಪ್ರವಾಸೋದ್ಯಮ ಇಲಾಖೆಯಿಂದ ಯಾವುದೇ ಯೋಜನೆಯನ್ನು ರೂಪಿಸಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

* * * * *

ಮುದ್ರಕರು: ಸರ್ಕಾರಿ ಭದ್ರತಾ ಮುದ್ರಣಾಲಯ, ಪೀಣ್ಯ, ಬೆಂಗಳೂರು.